ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಬೀದರ್ ಜಿಲ್ಲೆಯ ಕಲ್ಲು ಗಣಿಗಾರಿಕೆಗಳ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

239 (300) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಕೆಲವು ಗಣಿಗಳಲ್ಲಿ ಬಾಲ ಕಾರ್ಮಿಕರನ್ನು ನೇಮಿಸಿಕೊಂಡು ದುಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?